# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸುಳ್ಳು ದಾಖಲೆಗಳನ್ನು ನೀಡಿ ಜಾತಿ ಪ್ರಮಾಣ ಪತ್ರ ಪಡೆದು ಮೀಸಲಾತಿ ಕ್ಷೇತ್ರದಿಂದ ಆಯ್ಕೆಯಾಗಿರುವ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43–ಎ ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರ ಪತ್ರ ಸಂಖ್ಯೆ. :ತುಜಿಪ/ಅಭಿ/ವಿವ–03/189/2016–17 ದಿನಾಂಕ:21–02–2017.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:05–07–2017ರ ಕಾರಣ ಕೇಳುವ ನೋಟೀಸು.
3. ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ದಿನಾಂಕ:24–07–2017ರ ಲಿಖಿತ ಹೇಳಿಕೆ.
4. ಅಪರ ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ರವರ ಪತ್ರ ಸಂಖ್ಯೆ ನಂ. ಜು(2)ವಿವ/06/2017–18 ದಿನಾಂಕ: 31–07–2017.
5. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ 09.08.2017 ಮತ್ತು 22–08–2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:21-02-2017ರ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ಜಾತಿ ಪ್ರಮಾಣ ಪತ್ರವನ್ನು ಉಪವಿಭಾಗಾಧಿಕಾರಿಗಳು ತುಮಕೂರು ಉಪವಿಭಾಗ, ತುಮಕೂರು ಇವರ ನ್ಯಾಯಾಲಯದ ಪ್ರರಕರಣ ಸಂಖ್ಯೆ:ಇಎಲ್ಎನ್/ಸಿಆರ್/06/2014–15 ದಿನಾಂಕ:03–11–2016 ರಲ್ಲಿ ಶ್ರೀಮತಿ ಲಕ್ಷ್ಮೀದೇವಮ್ಮನವರು ಸುಳ್ಳು ದಾಖಲೆಗಳನ್ನು ನೀಡಿ ಜಾತಿ ಪ್ರಮಾಣ ಪತ್ರವನ್ನು ಪಡೆದಿರುವುದರಿಂದ ನೀಡಲಾಗಿರುವ ಜಾತಿ ಪ್ರಮಾಣ ಪತ್ರವನ್ನು ರದ್ದು ಪಡಿಸಿರುತ್ತಾರೆ. ಶ್ರೀಮತಿ ಲಕ್ಷ್ಮೀದೇವಮ್ಮ ರವರ ಜಾತಿ ಪ್ರಮಾಣ ಪತ್ರ ರದ್ದು ಗೊಳಿಸಿರುವ ಮಾಹಿತಿಯನ್ನು ತಹಸಿಲ್ದಾರ್ ಗುಬ್ಬಿ ತಾಲ್ಲೂಕು, ಗುಬ್ಬಿ ರವರು ಕಾರ್ಯನಿರ್ವಾಹಕ ಅಧಿಕಾರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ರವರಿಗೆ ತಿಳಿಸುತ್ತಾ ಕೂಡಲೇ ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ. ಅದ್ದರಿಂದ ಶ್ರೀಮತಿ ಲಕ್ಷ್ಮೀದೇವಮ್ಮ ರವರನ್ನು ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ಹಾಗೂ ಸದಸ್ಯತ್ವದಿಂದ ತೆಗೆದು ಹಾಕಲು ಪ್ರಸ್ತಾವನೆಯನ್ನು ಸಲ್ಲಿಸಿರುವ ಹಿನ್ನಲೆಯಲ್ಲಿ ಶ್ರೀಮತಿ ಲಕ್ಷ್ಮೀದೇವಮ್ಮ ರವರನ್ನು ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ಹಾಗೂ ಸದಸ್ಯತ್ವದಿಂದ ಅನರ್ಹಗೊಳಿಸಲು ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಗುಬ್ಬಿ ತಾಲ್ಲೂಕು, ಹೇರೂರು ಗ್ರಾಮ ಪಂಚಾಯತಿ **ಎಸ್.ಸಿ ಮಹಿಳೆ ಮೀಸಲು ಕ್ಷೇತ್ರದಿಂದ** ಚುನಾಯಿತರಾಗಿರುವ ಶ್ರೀಮತಿ ಲಕ್ಷ್ಮೀದೇವಮ್ಮ ಇವರು "ತಿಗಳ" ಜಾತಿಗೆ ಸೇರಿದ್ದು ಅಂತರ್ ಜಾತಿ ವಿವಾಹವಾಗಿದ್ದು, ಇವರ ಪತಿ "ಆದಿ ಕರ್ನಾಟಕ" ಜಾತಿಗೆ ಸೇರಿದವರಾಗಿದ್ದು, ಇವರು ಜಾತಿ ಪ್ರಮಾಣ ಮಾಡಿಸುವ ವೇಳೆ ತಮ್ಮ ಜಾತಿ ತಿಗಳ ಜನಾಂಗ ಎಂಬುದನ್ನು ಮುಚ್ಚಿಟ್ಟು ಗ್ರಾಮ ಪಂಚಾಯತಿ ಚುನಾವಣೆಯಲ್ಲಿ ಸ್ಪರ್ಧಿಸಲು "ಆದಿ ಕನಾಟಕ" ಎಂದು ಸುಳ್ಳು ಜಾತಿ ಪ್ರಮಾಣಪತ್ರ ಪಡೆದಿರುತ್ತಾರೆ ಎಂದು ಶ್ರೀ ರಂಗನಾಥ್ ಬಿನ್ ಬಲರಾಮೇಗೌಡ ತೊರೇಹಳ್ಳಿ ಗ್ರಾಮ ಇವರು ಉಪವಿಭಾಗಾಧಿಕಾರಿಗಳು ತುಮಕೂರು ಉಪವಿಭಾಗ, ತುಮಕೂರು ರವರಿಗೆ ದೂರು ಸಲ್ಲಿಸಿದ ಮೇರೆಗೆ ಸದರಿ ಪ್ರಕರಣದ ಬಗ್ಗೆ ಉಪವಿಭಾಗಾಧಿಕಾರಿ, ತುಮಕೂರು ಉಪವಿಭಾಗ,

ತುಮಕೂರು ರವರ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಲಾಗಿ ಶ್ರೀಮತಿ ಲಕ್ಷ್ಮೀದೇವಮ್ಮನವರ ಶಾಲಾ ದಾಖಲಾತಿ ಹಾಗೂ ಅಂತರ್ ಜಾತಿ ವಿವಾಹ ಪ್ರಕರಣದಲ್ಲಿ ಸಮಾಜ ಕಲ್ಯಾಣ ಇಲಾಖೆ ಯವರು ಸದರಿಯವರಿಗೆ ಪ್ರೋತ್ಸಾಹ ಧನ ಮಂಜೂರು ಮಾಡಿರುವ ದಾಖಲಾತಿಗಳಲ್ಲಿ ಲಕ್ಷ್ಮೀದೇವಮ್ಮ ನವರು ತಿಗಳ ಜಾತಿಗೆ ಸೇರಿದವರೆಂದು ನಮೂದಾಗಿರುವ ಹಿನ್ನಲೆಯಲ್ಲಿ ಉಪವಿಭಾಗಾಧಿಕಾರಿಗಳು ತುಮಕೂರು ಉಪವಿಭಾಗ, ತುಮಕೂರು ಇವರ ನ್ಯಾಯಾಲಯದ ಆದೇಶ ಸಂಖ್ಯೆ:ಇಎಲ್ಎನ್/ಸಿಆರ್/06/2014-15 ದಿನಾಂಕ:03-11-2016 ರಲ್ಲಿ "ಶ್ರೀಮತಿ ಲಕ್ಷ್ಮೀದೇವಮ್ಮ ಕೋಂ ಕುಮಾರ್, ತೊರೆಹಳ್ಳಿ, ಕಸಬಾ ಹೋಬಳಿ, ಗುಬ್ಬಿ ತಾಲ್ಲೂಕು, ರವರಿಗೆ ಗುಬ್ಬಿ ತಾಲ್ಲೂಕು ತಹಸಿಲ್ದಾರ್ ರವರು ನಮೂನೆ-ಡಿ ರಲ್ಲಿ ಸದರಿ ಲಕ್ಷ್ಮೀದೇವಮ್ಮ ಪ.ಜಾ.(ಆದಿ ಕರ್ನಾಟಕ)ಗೆ ಸೇರಿದವರೆಂದು ಪ್ರಮಾಣಿಸಿ ನೀಡಿದ RD0038414029843 ರ ಕ್ರಮಾಂಕದ ದಿನಾಂಕ:15-05-2015ರ ಜಾತಿ ಪ್ರಮಾಣ ಪತ್ರವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿರುತ್ತದೆ" ಎಂದು ಆದೇಶ ಮಾಡಿರುತ್ತಾರೆ. ಶ್ರೀಮತಿ ಲಕ್ಷ್ಮೀದೇವಮ್ಮ ನವರು ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ಗ್ರಾಮ ಪಂಚಾಯತಿಗೆ ಮೀಸಲಾತಿ ಕ್ಷೇತ್ರದಿಂದ ಸದಸ್ಯರಾಗಿ ಹಾಗೂ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಕಂಡುಬರುವುದರಿಂದ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕುವ ಬಗ್ಗೆ ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ರವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು,

ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ದಿನಾಂಕ:14-03-2017ರ ಲಿಖಿತ ಹೇಳಿಕೆಯನ್ನು ಈ ಕೆಳಕಂಡಂತೆ ನೀಡಿರುತ್ತಾರೆ.

ಈ ಪ್ರಕರಣವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು ಕೇಸ್ ನಂ. WP Nos. 590/17 & 1950/17 ವಿಚಾರಣೆ ನಡೆಯುತ್ತಿದ್ದು, ಅಂತಿಮ ಆದೇಶ ಬಾಕಿ ಇರುತ್ತದೆ. ಆದ್ದರಿಂದ ಕಾಲಾವಕಾಶ ನೀಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಅಪರ ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ, ರವರು ಶ್ರೀಮತಿ ಲಕ್ಷ್ಮೀದೇವಮ್ಮ ನವರು ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ಗ್ರಾಮ ಪಂಚಾಯತಿಗೆ ಮೀಸಲಾತಿ ಕ್ಷೇತ್ರದಿಂದ ಸದಸ್ಯರಾಗಿ ಹಾಗೂ ಅಧ್ಯಕ್ಷರಾಗಿ ಆಯ್ಕೆಯಾಗಿರುವುದರ ವಿರುದ್ಧ ಶ್ರೀಮತಿ ಸೌಭಾಗ್ಯಮ್ಮ ನವರು ಉಚ್ಚ ನ್ಯಾಯಾಲಯದಲ್ಲಿ ರಿ.ಪಿ.ನಂ.1950/2017 ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ಶ್ರೀಮತಿ ಲಕ್ಷ್ಮೀದೇವಮ್ಮನವರ ವಿರುದ್ಧ 6 ವಾರದೊಳಗಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ದಿನಾಂಕ:17-07-2017 ರಂದು ಆದೇಶ ಮಾಡಿರುತ್ತಾರೆ.

ಆದ್ದರಿಂದ ಆದೇಶದಂತೆ ಕ್ರಮ ವಹಿಸುವಂತೆ ಅಪರ ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ರವರು ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ (4) ರನ್ವಯ ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ ದಿನಾಂಕ 19-08-2017 ರಂದು ಜರುಗಿದ ವಿಚಾರಣೆಯಲ್ಲಿ ಆಪಾದಿತ ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯತಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಗುಬ್ಬಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹೇರೂರು ಗ್ರಾಮ ಪಂಚಾಯತಿ ಹಾಜರಾಗಿರುತ್ತಾರೆ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು

ಕೇಸ್ ನಂ. WP Nos. 590/17 & 1950/17 ದಿನಾಂಕ:21-02-2017ರಂದು ವಜಾ ಆಗಿರುವುದನ್ನು ನ್ಯಾಯಾಲಯದ ಗಮನಕ್ಕೆ ತರಲಾಯಿತು. ಉಪವಿಭಾಗಾಧಿಕಾರಿಗಳು ತುಮಕೂರು ಉಪವಿಭಾಗ, ತುಮಕೂರು ರವರು ಜಾತಿ ಪ್ರಮಾಣ ಪತ್ರ ರದ್ದು ಪಡಿಸಿರುವ ವಿರುದ್ಧ ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ಇವರಿಗೆ ಮೇಲ್ಮನವಿ ಸಲ್ಲಿಸಲಾಗಿದೆ ಎಂದು ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ ರವರು ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ದಿನಾಂಕ 06-10-2017 ರಂದು ಜರುಗಿದ ವಿಚಾರಣೆಯಲ್ಲಿ ಆಪಾದಿತ ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯತಿ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ತುಮಕೂರು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಗುಬ್ಬಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹೇರೂರು ಗ್ರಾಮ ಪಂಚಾಯತಿ ಹಾಜರಾಗಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ರವರ ಪ್ರಸ್ತಾವನೆಗಳು, ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ನೀಡಿರುವ ಲಿಖಿತ ಹೇಳಿಕೆಯನ್ನು ಸರ್ಕಾರವು ಪರಿಶೀಲಿಸಿದ್ದು, ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸುಳ್ಳು ದಾಖಲೆಗಳನ್ನು ನೀಡಿ ಜಾತಿ ಪ್ರಮಾಣ ಪತ್ರ ಪಡೆದು 2015ರ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆಯಲ್ಲಿ ಮೀಸಲಾತಿ ಕ್ಷೇತ್ರದಿಂದ ಸದಸ್ಯರಾಗಿ ಆಯ್ಕೆಯಾಗಿ, ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಇವರನ್ನು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 431 ಗ್ರಾಪಂಅ 2017 ಬೆಂಗಳೂರು, ದಿನಾಂಕ: 02-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸುಳ್ಳು ದಾಖಲೆಗಳನ್ನು ನೀಡಿ ಜಾತಿ ಪ್ರಮಾಣ ಪತ್ರ ಪಡೆದು 2015ರ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆಯಲ್ಲಿ ಮೀಸಲಾತಿ ಕ್ಷೇತ್ರದಿಂದ ಸದಸ್ಯರಾಗಿ ಆಯ್ಕೆಯಾಗಿ, ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಇವರನ್ನು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಸರ್ಕಾರವು ಆದೇಶಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್), 2/4
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

2/4

ಗೆ:

1. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
4. ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೇರೂರು ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.